ದಿನಾಂಕಃ 23-01-2026 ರಂದು PW-3 ಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ – ಶ್ರೀ ಡಿಜಿಬಿ ವಕೀಲರಿಂದ.**

ಈ ದಾವೆಯನ್ನು ಜಿ ಈರಪ್ಪ ಮತ್ತು ಈರಮ್ಮ ಅವರ ತಾಯಿ ವಿರುದ್ಧ ಪಾಲು ವಿಭಾಗಕ್ಕೆ ಹಾಕಿರುತ್ತಾರೆ. ದಾವಾ ಆಸ್ತಿ ಹೊಲ ಆಗಿರುತ್ತದೆ. 1 ನೇ ಪ್ರತಿವಾದಿಗೆ ದಾವಾ ಆಸ್ತಿ ಖರೀದಿ ಮುಖಾಂತರ ಬಂದಿರುತ್ತದೆ. ಅದನ್ನು ವಾದಿಗಳು ಹಾಗೂ 1 ನೇ ಪ್ರತಿವಾದಿ ಖರೀದಿ ಮಾಡಿರುತ್ತಾರೆ. ದಾವಾ ಆಸ್ತಿಯ ಸರ್ವೆ ನಂಬರ 308/ಎ, 2.64 ಎಕರೆ ಆಗಿರುತ್ತದೆ. ದಾವಾ ಆಸ್ತಿ ಒಟ್ಟು ಕುಟುಂಬದ ಆಸ್ತಿ ಅಲ್ಲ, ಅದು 1 ನೇ ಪ್ರತಿವಾದಿಯ ಸ್ವಂತ ಆಸ್ತಿ ಎಂದರೆ ಸುಳ್ಳು. ಅದನ್ನು ವಾದಿ ಹಾಗೂ ಪ್ರತಿವಾದಿ ಖರೀದಿ ಮಾಡಿದ್ದಾರೆ ಎಂದು ನಾನು ಹೇಳುತ್ತಿದ್ದು ಅವರು ಖರೀದಿ ಮಾಡುವಾಗ ನಾನು ಇರಲಿಲ್ಲ. ಹಿರಿಯರು ಹೇಳಿದ ಮೇರೆಗೆ ಮೂವರು ಸೇರಿ ಖರೀದಿ ಮಾಡಿದ್ದಾರೆ ಎಂದು ಹೇಳುತ್ತಿದ್ದೇನೆ. ದಾವಾ ಆಸ್ತಿಗೆ ಸಂಬಂಧಿಸಿದ ದಾಖಲಾತಿಯನ್ನು ನೋಡಿದ್ದೇನೆ. ಅದು ಈಗ 2 ನೇ ಪ್ರತಿವಾದಿಯ ಹೆಸರಿನಲ್ಲಿದೆ. ಆದರೆ ವಾದಿಗಳ ಸ್ವಾಧೀನದಲ್ಲಿದೆ. **ದಾವಾ ಆಸ್ತಿಯ** ಚೆಕ್ಕಬಂದಿ ಗೊತ್ತು. ದಾವಾ ಆಸ್ತಿ 1 ನೇ ಪ್ರತಿವಾದಿಯ ಸ್ವಂತ ಆಸ್ತಿ, ಅದನ್ನು ಈಗ 2 ನೇ ಪ್ರತಿವಾದಿ ಖರೀದಿ ಮಾಡಿ ಸ್ವಾಧೀನದಲ್ಲಿದ್ದಾರೆ ಎಂದರೆ ಸುಳ್ಳು. ವಾದಿಗಳ ಮಾತನ್ನು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಬಗ್ಗೆ ನನಗೆ ವೈಯುಕ್ತಿಕ ಮಾಹಿತಿ ಇಲ್ಲ ಎಂದರೆ ಸರಿಯಲ್ಲ.

ಪಾಟೀ ಸವಾಲು ಮುಕ್ತಾಯ. ಮರು ವಿಚಾರಣೆ ಇಲ್ಲ.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,

ಕೂಡ್ಲಿಗಿ.